ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 34 ಡಿಪಿಐ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:22.03.2018.

## ಅಧಿಸೂಚನೆ

ಸಾರ್ವಜನಿಕ ಶಿಕ್ಷಣ ಇಲಾಖೆಯ ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ) ವೃಂದದ ಅಧಿಕಾರಿಯಾದ ಶ್ರೀಮತಿ ಸಿದ್ಧಮ್ಮ, ವಿಷಯ ಪರಿವೀಕ್ಷಕರು(ವೃತ್ತಿ ಶಿಕ್ಷಣ) ಉಪನಿರ್ದೇಶಕರ ಕಛೇರಿ, ಕಲಬುರ್ಗಿ ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವೇತನ ಶ್ರೇಣಿ ರೂ.28100-700-28800-800-33600-900-39000-1050-45300-1200-50100ರ ಗ್ರೂಪ್-ಎ ಕಿರಿಯ ವೇತನ ಶ್ರೇಣಿಯ ಹಿರಿಯ ಸಹಾಯಕ ನಿರ್ದೇಶಕರು(ವೃತ್ತಿ ಶಿಕ್ಷಣ) ವೃಂದದಲ್ಲಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1958ರ ನಿಯಮ 32ರಡಿ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಸ್ವತಂತ್ರ ಪ್ರಭಾರದಲ್ಲಿರಿಸಿ, ಹಿರಿಯ ಸಹಾಯಕ ನಿರ್ದೇಶಕರು(ವೃತ್ತಿ ಶಿಕ್ಷಣ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇಲ್ಲಿನ ಖಾಲಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ನೇಮಿಸಲಾಗಿದೆ.

ಷರತ್ತುಗಳು:-

1. ನಿಯಮ 32ರಡಿ ಮಾಡಲಾಗುವ ಸ್ವತಂತ್ರ ಪ್ರಭಾರ ವ್ಯವಸ್ಥೆಯು ಕ್ರಮ ಬದ್ಧ ಮುಂಬಡ್ತಿ ಬದಲಿಗೆ ಮಾಡುವ ಒಂದು ತಾತ್ಕಾಲಿಕ ವ್ಯವಸ್ಥೆಯಾಗಿದೆ. ಅದು ಮುಂಬಡ್ತಿ ಅಲ್ಲ. ಸ್ವತಂತ್ರ ಪ್ರಭಾರದಲ್ಲಿರಿಸುವ ಆದೇಶವನ್ನು ಯಾವುದೇ ಸಂದರ್ಭದಲ್ಲಾದರೂ ಹಿಂದಕ್ಕೆ ಪಡೆಯಲು ಆಸ್ಪದವಿರುತ್ತದೆ.
2. ಈ ವ್ಯವಸ್ಥೆಯು ತಾತ್ಕಾಲಿಕವಾಗಿದ್ದು, ಪೂರ್ವಾನ್ವಯ ಮುಂಬಡ್ತಿಗೆ ಹಕ್ಕೊತ್ತಾಯ ಮಾಡುವಂತಿಲ್ಲ.
3. ಈ ವ್ಯವಸ್ಥೆಯು ಮಾನ್ಯ ಸರ್ವೋಚ್ಚ ನ್ಯಾಯಾಲಯವು ದಿ:09/02/2017ರಂದು ಸಿವಿಲ್ ಅಪೀಲ್ ಸಂಖ್ಯೆ:2368/2011ರಲ್ಲಿ ಶ್ರೀ ಬಿ.ಕೆ. ಪವಿತ್ರ ಪ್ರಕರಣದಲ್ಲಿ ನೀಡಿರುವ ತೀರ್ಪಿನ ವಿರುದ್ಧ ಸಲ್ಲಿಸಲಾಗಿರುವ ಪುನರ್ ಪರಿಶೀಲನಾ ಅರ್ಜಿಯ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ.

23/3/18.
EST-1 (6) 218 26/3/18

ನಿಯಮ 32ರಡಿ ಸ್ವತಂತ್ರ ಪ್ರಭಾರದಲ್ಲಿರಿಸಿ ಸ್ಥಳನಿಯುಕ್ತಿಗೊಳಿಸಲಾದ ಅಧಿಕಾರಿಯು ಸ್ಥಳನಿಯುಕ್ತಿ/ನೇಮಕಗೊಂಡ ಸ್ಥಳದಲ್ಲಿ ಕೂಡಲೇ ಕಾರ್ಯವರದಿ ಮಾಡಿಕೊಂಡು ಸಿ.ಟಿ.ಸಿ. ಪ್ರತಿಯನ್ನು ಸರ್ಕಾರಕ್ಕೆ ಒದಗಿಸುವಂತೆ ಸೂಚಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಡಿ. ನಾಗೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ(ಆಡಳಿತ).

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (ಎ&ಇ), ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಕರ್ನಾಟಕ, ಬೆಂಗಳೂರು-1.
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ / ಧಾರವಾಡ.

4) ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ, ಬೆಂಗಳೂರು.
5) ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, ನಂ.4, 100 ಅಡಿ ವರ್ತುಲ ರಸ್ತೆ, ಬನಶಂಕರಿ 3ನೇ ಹಂತ, ಬೆಂಗಳೂರು-560 085.
6) ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರ್ಗಿ ಜಿಲ್ಲೆ.
7) ಸಂಬಂಧಪಟ್ಟ ಅಧಿಕಾರಿಗೆ(ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮುಖಾಂತರ).
8) ಮಾಹಿತಿ ಕೇಂದ್ರ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ, ಕಟ್ಟಡ, ಬೆಂಗಳೂರು-560 001.
9) ಶಾಖಾರಕ್ಷಾ ಕಡತ // ಹೆಚ್ಚುವರಿ ಪ್ರತಿಗಳು.

<u>ಪ್ರತಿಗಳು ಮಾಹಿತಿಗಾಗಿ:-</u>

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
3) ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.